# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:113 RNI NO.KAR KAN/2003/10452:No./PMG/KA/NK/BM/743/24-26 ಬುಧುವಾರ ದಿನಾಂಕ: 27-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


### ಲೋಕಸಭಾ ಚುನಾವಣೆ:ಮತಕ್ಷೇತ್ರಗಳಿಗೆ ಇವಿಎಂ

## ಸ್ಟ್ರಾಂಗ್ ರೂಮ್ ಗಳಿಗೆ ಇವಿಎಂ ರವಾನೆ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ, ಮಾ.26: ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಮೊದಲ ಹಂತದ ರ್ಯಾಂಡಮೈಜೇಳನ್ ಪ್ರಕ್ರಿಯೆ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಎಲೆಕ್ಟ್ರಾನಿಕ್ ಮತಯಂತ್ರಗಳನ್ನು ವಿಧಾನಸಭಾ ಕ್ಷೇತ್ರವಾರು ರವಾನೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ನಗರದ ಹಿಂಡಲಗಾ ಗ್ರಾಮದಲ್ಲಿರುವ ಭಾರತ ಚುನಾವಣಾ ಆಯೋಗದ ಉಗ್ರಾಣ(ಗೋಡೌನ್) ದಲ್ಲಿರುವ ಎಲೆಕ್ಟ್ರಾನಿಕ ಮತಯಂತ್ರಗಳನ್ನು ಮಂಗಳವಾರ(ಮಾ.26) ಬಿಗಿಭದ್ರತೆಯೊಂದಿಗೆ ಆಯಾ ವಿಧಾನಸಭಾ ಮತಕ್ಷೇತ್ರಗಳಿಗೆ ಕಳುಹಿಸಲಾಯಿತು.

ರ್ಯಾಂಡಮೈಜೇಳನ್ ಪ್ರಕ್ರಿಯೆಯಲ್ಲಿ ಹಂಚಿಕೆಗೊಂಡಿರುವ ಮತಯಂತ್ರಗಳನ್ನು ಜಿಪಿಎಸ್ ಆಧಾರಿತ ವಾಹನಗಳ ಮೂಲಕ ಪೊಲೀಸ್ ಭದ್ರತೆಯೊಂದಿಗೆ ಮಂಗಳವಾರ ಮಧ್ಯರಾತ್ರಿಯವರೆಗೆ ರವಾನೆ ಮಾಡಲಾಯಿತು.

ಆಯಾ ತಾಲ್ಲೂಕುಗಳಲ್ಲಿ ಸ್ಥಾಪಿಸಲಾಗಿರುವ ಸ್ಟ್ರಾಂಗ್ ರೂಮ್ ಗಳಲ್ಲಿ ಇವಿಎಂ ಇರಿಸಲಾಗುತ್ತದೆ. ಎರಡನೇ ಚುನಾವಣಾ ವೀಕ್ಷಕರು ಆಗಮಿಸಿದ ಬಳಿಕ ಅವರ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಎರಡನೇ ಹಂತದ ರ್ಯಾಂಡಮೈಜೇಳನ್ ಮಾಡಲಾಗುವುದು.

ಎರಡನೇ ಹಂತದ ರ್ಯಾಂಡಮೈಜೇಳನ್ ಆದ ಬಳಿಕವೇ ಯಾವ ಮತಗಟ್ಟೆಗೆ ಯಾವ ಇವಿಎಂ ಹೋಗಲಿದೆ ಎಂಬುದು ಗೊತ್ತಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಎಲೆಕ್ಟ್ರಾನಿಕ್ ಮತಯಂತ್ರಗಳ ಪ್ರಾಥಮಿಕ ಹಂತದ ಪರಿಶೀಲನೆ(ಎಫ್.ಎಲ್.ಸಿ) ನಡೆಸಿ ಉಗ್ರಾಣದಲ್ಲಿ ಇಡಲಾಗುತ್ತದೆ. ಹೀಗೆ ಎಫ್.ಎಲ್.ಸಿ ಮಾಡಲಾಗಿರುವ ಮತಯಂತ್ರಗಳನ್ನು ಪ್ರಥಮ ಹಂತದ ರ್ಯಾಂಡಮೈಜೇಳನ್ ಪ್ರಕ್ರಿಯೆ ಮೂಲಕ ಆಯಾ ಮತಕ್ಷೇತ್ರಗಳಿಗೆ ಅಗತ್ಯಾನುಸಾರ ಶೇ.130 ರಷ್ಟು ಇವಿಎಂ ಹಂಚಿಕೆ ಮಾಡಲಾಗಿರುತ್ತದೆ ಎಂದು ವಿವರಿಸಿದರು.

ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರ ನೇತೃತ್ವದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೇರಿದಂತೆ ಜಿಲ್ಲೆಯ ಎಲ್ಲ ಹದಿನೆಂಟು ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು ಇವಿಎಂ ರವಾನೆ ಕಾರ್ಯದ ಉಸ್ತುವಾರಿ ವಹಿಸಿದ್ದರು.

## ಲಂಚ ಪಡೆಯುತ್ತಿದ್ದ ಪಂಚಾಯತ ರಾಜ್ ಅಭಿಯಂತರರ ಬಂಧನ

ಬೆಳಗಾವಿ,ಮಾ.26 : ಆಪಾದಿತ ಅಧಿಕಾರಿಯು ಮಾ. 26 ರಂದು ತನ್ನ ಕೊಠಡಿಯಲ್ಲಿ ಫಿರ್ಯಾದಿಯಿಂದ ಲಂಚದ ಹಣವನ್ನು ಸ್ವೀಕರಿಸುವ ವೇಳೆ ಯಶಸ್ವಿಯಾಗಿ ಟ್ರ್ಯಾಪ್ ಮಾಡಿ ಸದರಿ ಸಹಾಯಕ ಕಾರ್ಯಪಾಲಕ ಅಭಿಯಂತರ, ಪಂಚಾಯತ ರಾಜ್ ಉಪವಿಭಾಗ ಖಾನಾಪೂರ ದುರದುಂಡೇಶ್ವರ ಬನ್ನೂರ ರವರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗಿರುತ್ತದೆ.

ಸದರಿ ಕಾಮಗಾರಿಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಸಹಾಯಕ ಕಾರ್ಯಪಾಲಕ ಅಭಿಯಂತರರಾದ ದುರದುಂಡೇಶ್ವರ ಮಹಾದೇವ ಅವರು ಫಿರ್ಯಾದಿ ವಿನಾಯಕ ಮುತಗೇಕರ ರವರಿಗೆ ರೂ. 10,000 ಲಂಚದ ಹಣಕ್ಕೆ ಬೇಡಿಕೆ ಇಟ್ಟ ಹಿನ್ನೆಲೆಯಲ್ಲಿ ಈ ಬಗ್ಗೆ ಲಂಚ ಕೊಡಲು ಮನಸ್ಸಿಲ್ಲದೇ ಫಿರ್ಯಾದಿದಾರರು ಆಪಾದಿತ ಅಧಿಕಾರಿಯ ಲಂಚ ಬೇಡಿಕೆಯ ಬಗ್ಗೆ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಲೋಕಾಯುಕ್ತರು ದಾಳಿ ಮಾಡಿ ದುರದುಂಡೇಶ್ವರ ಬನ್ನೂರ ಅವರನ್ನು ಬಂಧಿಸುವಲಿ ಯಶಸ್ವಿಯಾಗಿದ್ದಾರೆ.

ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲೂಕಿನ ಕಾಂಜಳೆ ಗ್ರಾಮದ ಸದಸ್ಯನಾಗಿರುವ ನೀಲಾವಡೆ ಗ್ರಾಮ ಪಂಚಾಯತಿಯ 2ನೇ ವಾರ್ಡನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ನರೇಗಾ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ತಾಂತ್ರಿಕ ಅನುಮೋದನೆ ಮಂಜೂರಾತಿ ಪಡೆಯುವ ಕುರಿತು ನೀಲಾವಡೆ ಗ್ರಾಮ ಪಂಚಾಯತಿಯಿಂದ ಪಂಚಾಯತ ರಾಜ್ ಇಂಜಿನೀಯರಿಂಗ ಉಪವಿಭಾಗ, ಖಾನಾಪೂರ ಕಛೇರಿಗೆ ಆನಲೈನ್ ಮುಖಾಂತರ ಕಳುಹಿಸಲಾಗಿತ್ತು.

ಸದರಿ ಟ್ರ್ಯಾಪ್ ಕಾರ್ಯಾಚರಣೆಯನ್ನು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಹನಮಂತರಾಯ ಮಾರ್ಗದರ್ಶನದಲ್ಲಿ ಡಿ.ಎಸ್.ಪಿ, ಭರತ್. ಎಸ್. ಆರ್, ಪೊಲೀಸ್ ಇನ್ಸ್‌ಪೆಕ್ಟರ್ ರವಿಕುಮಾರ ಧರ್ಮಟ್ಟಿ, ಉಸ್ಮಾನ ಅವಟಿ, ಲೋಕಾಯುಕ್ತ ಪೊಲೀಸ್ ಸಿಬ್ಬಂದಿಗಳಾದ ವಿಠ್ಠಲ ಬಸಕ್ರಿ, ಸಂತೋಷ ಬೇಡಗ, ಗಿರೀಶ ಪಾಟೀಲ, ಲಗಮಣ್ಣಾ ಹೊಸಮನಿ, ಬಸವರಾಜ ಹುದ್ದಾರ, ಬಸವರಾಜ ಕೊಡೊಳ್ಳಿ ತಂಡದವರಿಂದ ಕೈಗೊಳ್ಳಲಾಗಿರುತ್ತದೆ ಎಂದು ಕರ್ನಾಟಕ ಲೋಕಯುಕ್ತ ಬೆಳಗಾವಿ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲೋಕಸಭಾ ಸಾರ್ವತ್ರಿಕ ಚುನಾವಣೆ:ಎಲ್ಲಾ ನೌಕರರಿಗೆ ಡಿಸಿ ಸೂಚನೆ

## ಚುನಾವಣಾ ಕೆಲಸ ಕಾರ್ಯಗಳನ್ನು 24*7ರಂತೆ ಕರ್ತವ್ಯ ನಿರ್ವಹಿಸಿ: ಡಿಸಿ ನಲಿನ್ ಅತುಲ್

ಕೊಪ್ಪಳ, ಮಾರ್ಚ್ 26 : ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ, ಚುನಾವಣಾ ಕೆಲಸ ಕಾರ್ಯಗಳನ್ನು 24*7 ಅವಧಿಯಲ್ಲಿ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಸೂಚನೆ ನೀಡಿದ್ದಾರೆ.

ಭಾರತ ಚುನಾವಣಾ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಚುನಾವಣೆಯನ್ನು ನಡೆಸಲು ವೇಳಾ ಪಟ್ಟಿ ಪ್ರಕಟಿಸಿದ್ದು, ಮಾರ್ಚ್ 16 ರಿಂದ ಜೂನ್ 6ರ ವರೆಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಈಗಾಗಲೇ ಚುನಾವಣಾ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಜಿಲ್ಲೆಯಲ್ಲಿ ಸರ್ಕಾರಿ, ಅರೆ ಸರ್ಕಾರಿ ಇಲಾಖೆಗಳ, ಶೈಕ್ಷಣಿಕ ಸಂಸ್ಥೆಗಳು ಮತ್ತು ಶಾಲಾ ಕಾಲೇಜುಗಳ ಅಧಿಕಾರಿ, ಸಿಬ್ಬಂದಿಗಳನ್ನು ವಿವಿಧ ತಂಡಗಳಲ್ಲಿ ಚುನಾವಣಾ ಕರ್ತವ್ಯ ನಿರ್ವಹಣೆಗೆ ನೇಮಕ ಮಾಡಿ ಆದೇಶಿಸಲಾಗಿರುತ್ತದೆ.

ಚುನಾವಣಾ ತುರ್ತು ಕೆಲಸ ಕಾರ್ಯಗಳ ನಿರ್ವಹಣೆ ಸಂಬಂಧ, ಭಾರತ ಚುನಾವಣಾ ಆಯೋಗವು ಮತ್ತು ಮುಖ್ಯ ಚುನಾವಣಾಧಿಕಾರಿಗಳು, ಬೆಂಗಳೂರು ರವರ ಕಚೇರಿಯಿಂದ ಚುನಾವಣೆಗೆ ಸಂಬಂಧಿಸಿದಂತೆ ಕೋರುವ ವರದಿಗಳನ್ನು ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ನಿಗದಿತ ಸಮಯದೊಳಗೆ ಆಯೋಗಕ್ಕೆ ಸಲ್ಲಿಸಬೇಕಾಗಿರುವದರಿಂದ ಚುನಾವಣಾ ಇತರೆ ಇಲಾಖಾ ಅಧಿಕಾರಿ, ನೌಕರರು 24*7 ಅವಧಿಯಲ್ಲಿ ಕೇಂದ್ರ ಸ್ಥಾನದಲ್ಲಿ ಹಾಜರಿದ್ದು, ಚುನಾವಣಾ ತುರ್ತು ಕೆಲಸ ಕಾರ್ಯಗಳನ್ನು ನಿರ್ವಹಿಸಬೇಕಾಗಿರುತ್ತದೆ.

ಎಲ್ಲಾ ಇಲಾಖೆ ಹಾಗೂ ಅಧೀನ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ, ನೌಕರರು ಯಾವುದೇ ರೀತಿಯ ರಜೆಯ ಮೇಲೆ ತೆರಳದೆ ಕೇಂದ್ರಸ್ಥಾನದಲ್ಲಿದ್ದು, 24*7 ಅವಧಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಿಂದ ಕೋರುವ ವರದಿಗಳನ್ನು ತಪ್ಪದೇ ಸಲ್ಲಿಸಬೇಕಾಗಿರುತ್ತದೆ.

ಆದ ಕಾರಣ ಜಿಲ್ಲೆಯಲ್ಲಿ ಸರ್ಕಾರಿ, ಅರೆ ಸರ್ಕಾರಿ ಇಲಾಖೆಗಳ, ಶೈಕ್ಷಣಿಕ ಸಂಸ್ಥೆಗಳು, ಮತ್ತು ಶಾಲಾ ಕಾಲೇಜುಗಳ ಎಲ್ಲಾ ಅಧಿಕಾರಿ ಹಾಗೂ ನೌಕರರು ಕೇಂದ್ರ ಸ್ಥಾನದಲ್ಲಿದ್ದು, ಕಾರ್ಯ ನಿರ್ವಹಿಸಬೇಕು. ಅನಿವಾರ್ಯ ಅಥವಾ ತುರ್ತು ಸಂದರ್ಭಗಳಲ್ಲಿ ಯಾವುದೇ ಅಧಿಕಾರಿ, ನೌಕರರು ರಜೆಯ ಮೇಲೆ ತೆರಳಲು ಮತ್ತು ಕೇಂದ್ರ ಸ್ಥಾನವನ್ನು ಬಿಡಬೇಕಾದಲ್ಲಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಪೂರ್ವಾನುಮತಿ ಪಡೆದು ತೆರಳಬೇಕೆಂದು ಕಟ್ಟುನಿಟ್ಟಿನಲ್ಲಿ ಸೂಚನೆ ನೀಡಲಾಗಿದೆ.

ತಪ್ಪಿದ್ದಲ್ಲಿ ಚುನಾವಣಾ ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷತೆ, ಬೇಜಬ್ದಾರಿ ತೋರಿರುವದಾಗಿ ಪರಿಗಣಿಸಿ, ಸಂಬಂಧಿಸಿದ ಅಧಿಕಾರಿ, ನೌಕರರ ವಿರುದ್ಧ ಪ್ರಜಾ ಪ್ರಾತಿನಿಧ್ಯ ಕಾಯ್ದೆಯನ್ವಯ ಶಿಸ್ತಿನ ಕ್ರಮ ಕೈಗೊಳ್ಳಲಾಗುತ್ತದೆಂದು ಪ್ರಕಟಣೆ ತಿಳಿಸಿದೆ.

## ಸಿದ್ದಾಪುರ ಗ್ರಾಮದ ನರೇಗಾ ಕೂಲಿಕಾರರಿಗೆ ಮತದಾನ ಜಾಗೃತಿ



ಕೊಪ್ಪಳ, ಮಾರ್ಚ್ : ಕಾರಟಗಿ ತಾಲೂಕಿನ ಸಿದ್ದಾಪುರ ಗ್ರಾಮ ಪಂಚಾಯತ ನರೇಗಾ ಕೂಲಿಕಾರರಿಗೆ ನಾಲಾ ಹೂಳೆತ್ತುವ ಕೆಲಸ ನೀಡಲಾಗಿದ್ದು, ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಪ್ರಾರಂಭವಾಗಿರುವ "ವಲಸೆ ಯಾಕ್ರಿ , ನಿಮ್ಮೂರಲ್ಲೆ ಉದ್ಯೋಗ ಖಾತ್ರಿ" ಅಭಿಯಾನದ ಕುರಿತು ಮಾಹಿತಿ ನೀಡಲಾಯಿತು.

ಈ ವೇಳೆ ಮುಂಬರುವ ಲೋಕ ಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ನೂರಕ್ಕೆ ನೂರರಷ್ಟು ಮತದಾನ ಮಾಡುವಂತೆ ತಿಳಿಸಿ. ಕೂಲಿಕಾರರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.ನಂತರ ತಾಲೂಕಿನ ಗ್ರಾಮ ಪಂಚಾಯತಗಳಲ್ಲಿ ನರೇಗಾ ಯೋಜನೆಯಡಿ ಈಗಾಗಲೇ ಪ್ರಾರಂಭವಾಗಿರುವ "ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ ಖಾತ್ರಿ" ಅಭಿಯಾನದಲ್ಲಿ ಕೂಲಿಕಾರರಿಗೆ ಸತತ ಮೂರು ತಿಂಗಳು ಕೆಲಸ ನೀಡಲಾಗುತ್ತಿದ್ದು, ಪ್ರತಿಯೊಬ್ಬರೂ ನಮೂನೆ-6 ನೀಡಿ ಅಭಿಯಾನದ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಲಾಯಿತು.ಈ ಸಂದರ್ಭಗಳಲ್ಲಿ ತಾಲೂಕು ಐಇಸಿ ಸಂಯೋಜಕರು, ತಾಂತ್ರಿಕ ಸಹಾಯಕರು, ಕಾಯಕ ಬಂಧುಗಳು, ಕೂಲಿಕಾರರು ಇದ್ದರು.

## ಲೋಕಸಭಾ ಸಾರ್ವತ್ರಿಕ ಚುನಾವಣೆ:ಅಬಕಾರಿ ಇಲಾಖೆ ಸಂಬಂಧಿಸಿದ ದೂರುಗಳಿಗೆ ಉಚಿತ ಸಹಾಯವಾಣಿ

ಗದಗ ಮಾರ್ಚ 26: ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಹಿನ್ನಲೆಯಲ್ಲಿ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳ್ಳಭಟ್ಟಿ/ ಸಾರಾಯಿ/ನಕಲಿಮದ್ಯ/ಸೆಂದಿ/ಕಲಬೆರಕೆ/ಮದ್ಯತಯಾರಿಕೆ/ಸಂಗ್ರಹಣೆ/ಮಾರಾಟ ಹಾಗೂ ಗಾಂಜಾ/ಅಫಿಮೂ/ ಡ್ರಗ್ಸ್ ಹಾಗೂ ಇನ್ನಿತರೆ ಮಾದಕ ವಸ್ತುಗಳ ಸಂಗ್ರಹಣೆ/ಸೇವಣೆ/ ತಯಾರಿಕೆ/ಮಾರಾಟಕ್ಕೆ ಸಂಬಂಧಿಸಿದಂತೆ ಮಾಹಿತಿಗಳಿದ್ದಲ್ಲಿ ಜಿಲ್ಲಾಮಟ್ಟದ ಟೋಲ್ ಫ್ರೀ ನಂಬರ:1800-425-2329 ನೇದ್ದಕ್ಕೆ ಅಥವಾ ತಾಲೂಕು/ ವಲಯದಲ್ಲಿ ಅಬಕಾರಿ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಸಾರ್ವಜನಿಕರು ಈ ಕೆಳಕಂಡ ದೂರವಾಣಿಸಂಖ್ಯೆಗಳಿಗೆ ನೀಡಬಹುದಾಗಿದೆ.

ವಿವರ ಇಂತಿದೆ: ಕು: ನೇತ್ರಾ ಉಪ್ಪಾರ ಅಬಕಾರಿ ನಿರೀಕ್ಷಕರು, ಗದಗ ವಲಯ- ಗದಗ-ದೂ.ಸಂ. 9449848664, 9980870004; ಧನರಾಜ ಹಳ್ಳಿಖೇಡ  ಅಬಕಾರಿ ನಿರೀಕ್ಷಕರು, ಮುಂಡರಗಿ ವಲಯ-ಮುಂಡರಗಿ-ದೂ.ಸಂ. 9110615199: , ಮಲ್ಲಿಕಾರ್ಜುನ ಹನಗಂಡಿ-ಅಬಕಾರಿ ನಿರೀಕ್ಷಕರು- ನರಗುಂದ ವಲಯ -ನರಗುಂದ- 903589 7229; ಅಯ್ಯಾಳಿ ಗಡಿಗಿ ಅಂಬಣ್ಣ ಅಬಕಾರಿ ನಿರೀಕ್ಷಕರು- ರೋಣ ವಲಯ- ರೋಣ/ ಗಜೇಂದ್ರಗಡ- 9538461480, ಲಿಂಗರಾಜ , ಅಬಕಾರಿ ನಿರೀಕ್ಷಕರು- ಶಿರಹಟ್ಟಿ ವಲಯ- ಶಿರಹಟ್ಟಿ/ ಲಕ್ಷ್ಮೇಶ್ವರ  8123463017, ಪರಶುರಾಮ ವಡ್ಡರ- ಅಬಕಾರಿ ನಿರೀಕ್ಷಕರು, ಗದಗ ಉಪವಿಭಾಗ -ಗದಗ  9449597097, ಎ.ಬಿ.ಮಠಪತಿ- ಅಬಕಾರಿ ಉಪ ಅಧೀಕ್ಷಕರು-ಗದಗ ಉಪವಿಭಾಗ -9449597096, 9448859447; ಪ್ರವೀಣ ಕೆ- ಅಬಕಾರಿ ನಿರೀಕ್ಷಕರು- ಜಿಲ್ಲಾ ವಿಚಕ್ಷಣ ದಳ ಗದಗ ಜಿಲ್ಲಾ ವಿಚಕ್ಷಣ ದಳ ಗದಗ ಜಿಲ್ಲೆ- ದೂ.ಸಂ. 944959 7095, ಶ್ರೀಮತಿ ಲಕ್ಷ್ಮೀ- ಅಬಕಾರಿ ಉಪ ಆಯುಕ್ತರು ಗದಗ ಜಿಲ್ಲೆ-9449597093 ದೂರುಗಳನ್ನು ಸಾರ್ವಜನಿಕರು ಸಲ್ಲಿಸಬಹುದಾಗಿದೆ.

## ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು: ಮಹಾಂತೇಶ ಭಜಂತ್ರಿ

ಬೆಳಗಾವಿ,ಮಾ.26 : ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ನೀಡುವ ಈ ತರಬೇತಿ ಜಿಲ್ಲಾ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು/ ಅಧಿಕಾರಿಗಳಿಗೆ ಹಾಗೂ ಶುಶ್ರೂಷಕಿಯರಿಗೆ ತುಂಬಾ ಮಹತ್ವವಾಗಿದ್ದು, ದತ್ತು ಅಧಿನಿಯಮ ಕಾಯ್ದೆ-2022ರ ತಿದ್ದುಪಡಿಯು ತುಂಬಾ ಮಹತ್ವವಾಗಿದ್ದು, ಈ ವಿಷಯದ ಬಗ್ಗೆ ಎಲ್ಲ ಶಿಭಿರಾರ್ಥಿಗಳು ಚೆನ್ನಾಗಿ ತಿಳಿದುಕೊಳ್ಳಬೇಕು ಎಂದು ಬೆಳಗಾವಿಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಡಾ.ಅಶೋಕ ಕುಮಾರ ಶೆಟ್ಟಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಬೆಳಗಾವಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವೈದ್ಯಕೀಯ ವಿಜ್ಞಾನ ಸಂಸ್ಥೆ ಬೆಳಗಾವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೆಳಗಾವಿ ಇವರ ಸಂಯುಕ್ತಾಶ್ರಯದಲ್ಲಿ ಮಾ. 21 ರಂದು ನಿರ್ದೇಶನಾಲಯದಲ್ಲಿ ದತ್ತು ಅದಿನಿಯಮ ಕಾಯ್ದೆ-2022ರ ಹಾಗೂ ಮಮತೆಯ ತೊಟ್ಟಿಲು ಮತ್ತು 18 ವರ್ಷದೊಳಗಿನ ಗರ್ಭಿಣಿಯರಿಗೆ ಮಕ್ಕಳ ರಕ್ಷಣಾ ಸೌಲಭ್ಯಗಳ ಕುರಿತು ಜಿಲ್ಲಾ ಆಸ್ಪತ್ರೆಯ ವೈದ್ಯರಿಗೆ, ಅಧಿಕಾರಿಗಳಿಗೆ, ಶುಶ್ರೂಷಕಿಯರಿಗೆ ಮತ್ತು ಸಿಬ್ಬಂದಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತೇಶ ಭಜಂತ್ರಿ ಅವರು ಮಾತನಾಡಿ, ಭಾವಿ ದತ್ತು ತಂದೆ ತಾಯಂದಿರು ಕಾನೂನು ಬದ್ಧವಾಗಿ ಒಂದು ಮಗುವಿನ ಜವಾಬ್ದಾರಿ, ಆ ಮಗುವಿನ ಹಕ್ಕು ಸವಲತ್ತುಗಳು ಮತ್ತು ಜವಾಬ್ದಾರಿಗಳ ಸಹಿತ ತೆಗೆದುಕೊಳ್ಳುವ ಪ್ರಕ್ರಿಯವನ್ನು ದತ್ತು ಸ್ವೀಕಾರ ಮಾಡಬೇಕು. ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವು ಕಲ್ಪಿಸುತ್ತದೆ ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ ಪರಿತ್ಯಕ್ತ ನಿರ್ಗತಿಕ ಮಕ್ಕಳ ಪುನರ ವಸತಿಗೆ ನೆರವಾಗುವ ಒಂದು ಸೂಕ್ತ ಕಾರ್ಯಕ್ರಮವಾಗಿದೆ ಎಂದರು.

ಕಾನೂನು ಬಾಹಿರ ದತ್ತು ಆಗುವುದಿಲ್ಲಾ ನಮ್ಮ ಸ್ವತ್ತು ಕಾನೂನುನಡಿ ಪಡೆದ ದತ್ತು ಜೀವನವಿಡೀ ಸುಖದ ಸಂಪತ್ತು ಮಕ್ಕಳನ್ನು ಮಾರುವುದು, ಕೊಳ್ಳುವುದು ಅಥವಾ ಕಾನೂನು ಬಾಹಿರ ದತ್ತು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಕಾನೂನು ರೀತಿ ಶಿಕ್ಷಾರ್ಹ ಅಪರಾದ ಒಂದು ವೇಳೆ ಈ ಅಪರಾಧದಲ್ಲಿ ಬಾಗಿಯಾದಲ್ಲಿ 05 ವರ್ಷದವರಿಗೆ ಕಠಿಣ ಶಿಕ್ಷೆ ಹಾಗೂ ರೂ. 1.00 ಲಕ್ಷ ದಂಡ. ಆಸ್ಪತ್ರೆ ಸಿಬ್ಬಂದಿಗಳು ಬಾಗಿಯಾದಲ್ಲಿ 07 ವರ್ಷದವರಿಗೆ ಕಠಿಣ ಶಿಕ್ಷೆ ಹಾಗೂ ರೂ. 1.00 ಲಕ್ಷ ದಂಡ. ಇರುತ್ತದೆ ಹಾಗೂ ಮಮತೆಯ ತೊಟ್ಟಿಲು ಕಾರ್ಯಕ್ರಮವು ತುಂಬಾ ಮಹತ್ವವಾಗಿದೆ ಎಂದರು.

ಮಗು ಬೇಡವಾದಲ್ಲಿ ಕಸದ ತೊಟ್ಟಿ ,ಆಸ್ಪತ್ರೆ ಆವರಣಾ, ಶೌಚಾಲಯ, ರಸ್ತೆ ಬದಿ ಹಾಗೂ ಪೊದೆಗಳಲ್ಲಿ ಬಿಸಾಡಿ ಎಳೆಯ



ಜೀವಗಳನ್ನು ಹಿಂಸಿಸಬೇಡಿ, ಪರಿತ್ಯಕ್ತ ಮಕ್ಕಳ ರಕ್ಷಣೆಗಾಗಿ ಇರುವ ಮಮತೆಯ ತೊಟ್ಟಿಲುಗಳಲ್ಲಿ ಮಕ್ಕಳನ್ನು ಬಿಡಿ. ಮಕ್ಕಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಆಗಿರುತ್ತದೆ ಹಾಗೂ 1989 ನವೆಂಬರ್ 20 ರಂದು ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಡಿಕೆ ಜಾರಿ ಮಾಡಿದ್ದು, ಮಕ್ಕಳ ಹಿತರಕ್ಷಣೆ ಕಾರ್ಯಕ್ಷೇತ್ರಕ್ಕೆ ಮುಖ್ಯಬೆಂಬಲ ಹಾಗೂ ಚಿಂತನೆ ನೀಡಿದ್ದು ಮಕ್ಕಳೇ ದೇಶದ ಆಸ್ತಿ ಮತ್ತು 196 ದೇಶಗಳು ಈ ಒಡಂಬಿಕೆಗೆ ಸಹಿ ಹಾಕಿದ್ದು, ಅತೀ ಹೆಚ್ಚು ದೇಶಗಳು ಸಹಿ ಮಾಡಿದ ಐತಿಹಾಸಿಕ ಒಡಂಬಡಿಕೆಯಾಗಿದೆ

(6 ನೇ ಪುಟಕ್ಕೆ)